**ಓ.ಎಸ್. 89/2023 ಪಿಡಬ್ಲ್ಯೂ.1**

**ಸಾಕ್ಷಿಯನ್ನು ದಿಃ 30.10.2023 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದಃ**

**ನಾನು ನನ್ನ ಮುಖ್ಯ ವಿಚಾರಣೆಯ ಸಾಕ್ಷ್ಯವನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಸಂಗತಿಗಳು ಸತ್ಯವಾಗಿರುತ್ತವೆ ಎಂದು ಪ್ರಮಾಣೀಕರಿಸಿರುತ್ತೇನೆ.**

ನಮ್ಮ ಕುಟುಂಬದ ವಂಶವೃಕ್ಷವನ್ನು ಹಾಜರುಪಡಿಸಿದ್ದು ನಿಶಾನೆ ಪಿ 1 ಎಂದು, ಕೈಬರಹದ 4 ಪಹಣಿ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಶಾನೆ ಪಿ 2 ರಿಂದ 5 ಎಂದು, ಮ್ಯುಟೇಷನ್ ರಿಜಿಸ್ಟರ್ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಶಾನೆ ಪಿ 6 ಎಂದು, 7 ಮ್ಯುಟೇಷನ್ ರಿಜಿಸ್ಟರ್ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಶಾನೆ ಪಿ 7 ರಿಂದ 13 ಎಂದು, 2 ಡಿಮ್ಯಾಂಡ್ ರಿಜಿಸ್ಟರ್ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಶಾನೆ ಪಿ 14 ಮತ್ತು 15 ಎಂದು, ನನ್ನ ತಂದೆಗೆ ದಿನಾಂಕ 11.03.1991 ರಂದು ಬರೆದುಕೊಟ್ಟ ಕ್ರಯಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ನಿಶಾನೆ ಪಿ 16 ಎಂದು ಗುರುತಿಸಲಾಯಿತು.

(ಮುಂದುವರೆದ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೋರಿದ್ದು, ಮುಂದೂಡಲಾಯಿತು.)

**(ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಿದೆ)**

**ಸಾ ಓ ಹೇ ಸ ಒ**

**(ಎಂ.ಮಂಜುನಾಥ)**

**ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು**
**ಪಾಂಡವಪುರ**